**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯದಲ್ಲಿ, ತರೀಕೆರೆ.**

ಸಿಸಿ ನಂಬರ್.1254/2023

| | | | |
|---|---|---|---|
| ಸಾಕ್ಷಿಯ ಹೆಸರು | : ಸೈಯದ್ ಉಮರ್ | ಸಿ.ಡಬ್ಲ್ಯು | 5 |
| ತಂದೆಯ ಹೆಸರು | : ರಫೀಕ್ | ಪಿ.ಡಬ್ಲ್ಯು | 4 |
| ವಯಸ್ಸು | : 40 ವರ್ಷ | | |
| ಉದ್ಯೋಗ | : ಖಾಸಗಿ ಉದ್ಯೋಗ | | |
| ವಾಸ ಸ್ಥಳ | : ತರೀಕೆರೆ | | |

ದಿನಾಂಕಃ27.11.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು:

ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-

ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಪೋಲೀಸರು ನನ್ನ ಮುಂದೆ ಯಾವುದೇ ಪಂಚನಾಮೆಯನ್ನು ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ಆರೋಪಿಯ ಪರಿಚಯ ಇರುವುದಿಲ್ಲ. ಈಗ ತೋರಿಸುತ್ತಿರುವ ದಾಖಲೆಯ ಮೇಲೆ ನನ್ನ ಸಹಿ ಇರುತ್ತದೆ. ಸದರಿ ಸಹಿಯನ್ನು ಎಲ್ಲಿ, ಯಾವಾಗ ಮತ್ತು ಏತಕ್ಕಾಗಿ ಮಾಡಿದ್ದೇನೆ ಎಂದು ನೆನಪಿಲ್ಲ. ಸಾಕ್ಷಿಯ ಸಹಿ ಇರುವ ದಾಖಲೆ ಪಂಚನಾಮೆಯಾಗಿದ್ದು ಅದರ ಮೇಲಿನ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.

(ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ-

ದಿನಾಂಕ 16.08.2023 ರಂದು ಪೋಲೀಸರು ಸಂಜೆ 4 ಗಂಟೆಯಿಂದ 5 ಗಂಟೆಯ ಮಧ್ಯದಲ್ಲಿ ತರೀಕೆರೆ ಪಟ್ಟಣದಿಂದ ಲಿಂಗದಹಳ್ಳಿ ಕಡೆಗೆ ಹಾದು ಹೋಗುವ ರಸ್ತೆಯ 3 ನೇ ತಿರುವಿನಲ್ಲಿ ಪೋಲೀಸರು ಜಪ್ತಿ ಪಂಚನಾಮೆಯನ್ನು ಜರುಗಿಸಿ ಆರೋಪಿಯ ಕಡೆಯಿಂದ 590 ರೂ ನಗದು, 1 ಮಟ್ಕಾ ಚೀಟಿ ಮತ್ತು ಒಂದು ಬಾಲ್ ಪೆನ್ನು ವಶಪಡಿಸಿಕೊಂಡರು ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ

ವಕೀಲರು ಇರುವುದಿಲ್ಲ ಎಂದು ಹೇಳುತ್ತಾರೆ.

ಮರುವಿಚಾರಣೆ : ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ ಎ ಓ

ಸಹಿ/-

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು

ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯ, ತರೀಕೆರೆ